# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕೆ.ಐ.ಎ.ಡಿ.ಬಿ.ಯಿಂದ ಸ್ವಾಧೀನವಾಗುತ್ತಿರುವ ಜಮೀನಿಗೆ ಹಣದ ಬದಲಾಗಿ ಅಭಿವೃದ್ಧಿಪಡಿಸಿದ ಜಮೀನನ್ನು ಪರಿಹಾರವಾಗಿ ನೀಡುವ ಬಗ್ಗೆ.

+++

**ಪ್ರಸ್ತಾವನೆ:-**

ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಅಧಿನಿಯಮ 1966ರ ಅಡಿಯಲ್ಲಿ ರಚಿತವಾಗಿರುವ ಕೆ.ಐ.ಎ.ಡಿ.ಬಿ. ಮಂಡಳಿಯು ಸದರಿ ಅಧಿನಿಯಮದ ಧ್ಯೇಯೋದ್ದೇಶದಂತೆ ಕೈಗಾರಿಕಾ ಕ್ಷೇತ್ರಗಳ ಸ್ಥಾಪನೆ ಮತ್ತು ಕೈಗಾರಿಕೆಗಳ ಶೀಘ್ರಗತಿ ಹಾಗೂ ವ್ಯವಸ್ಥಿತ ಸ್ಥಾಪನೆಯನ್ನು ಉತ್ತೇಜಿಸುವ ಉದ್ದೇಶಕ್ಕಾಗಿ ಮತ್ತು ಕೈಗಾರಿಕಾ ಕ್ಷೇತ್ರಗಳಲ್ಲಿ ಕೈಗಾರಿಕಾ ಮೂಲಭೂತ ಸೌಕರ್ಯಗಳು ಹಾಗೂ ಸೌಲಭ್ಯಗಳನ್ನು ಒದಗಿಸುವುದು ಅಗತ್ಯ ಎಂದು ಸರ್ಕಾರದ ಅಭಿಪ್ರಾಯದಲ್ಲಿ ಕಂಡು ಬರುವ ಜಮೀನನ್ನು / ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುವ ಕಾರ್ಯವನ್ನು ನಿರ್ವಹಿಸುತ್ತಿರುತ್ತದೆ.

2) ಸರ್ಕಾರದ ಕೈಗಾರಿಕಾ ನೀತಿಯನುಸಾರ ಕೈಗಾರಿಕೆಗಳನ್ನು ಸ್ಥಾಪಿಸಲು ರಾಜ್ಯದ ವಿವಿಧ ಪ್ರದೇಶಗಳಲ್ಲಿ ಜಮೀನನ್ನು ಸ್ವಾಧೀನಪಡಿಸಿಕೊಳ್ಳಲು ಅಧಿನಿಯಮದನುಸಾರ ಅಧಿಸೂಚನೆಗಳನ್ನು ಹೊರಡಿಸಿ ಸ್ವಾಧೀನದ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ. ಒಪ್ಪಂದದ ಆಧಾರದ ಮೇರೆಗೆ ನಿಗದಿಯಾದ ಭೂಪರಿಹಾರವನ್ನು, ಭೂಮಾಲೀಕರು ಒಪ್ಪಿಕೊಳ್ಳದ ಪ್ರಕರಣಗಳಲ್ಲಿ ಕೆ.ಐ.ಎ.ಡಿ.ಬಿ. ಕಾಯ್ದೆ ಅಧಿನಿಯಮದ ಕಲಂ 29(3)ರಡಿ ಜಿಲ್ಲಾಧಿಕಾರಿಗಳು ನಿರ್ಧರಿಸುವ ಅವಾರ್ಡ್ ಮೊಬಲಗನ್ನು ಭೂಮಾಲೀಕರಿಗೆ ನೀಡುವ ಉದಾರ ಭೂ ಪರಿಹಾರ ನೀತಿಯನ್ನು ಮಂಡಳಿಯು ಅನುಸರಿಸುತ್ತಿದೆ. ಆದಾಗ್ಯೂ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳುವಾಗ ರೈತರಿಂದ ಮತ್ತು ಭೂಮಾಲೀಕರಿಂದ ಪ್ರತಿರೋಧ ಎದುರಿಸುವ ಪ್ರಸಂಗಗಳು ಆಗಾಗ್ಗೆ ಉದ್ಭವಿಸುತ್ತಿವೆ.

3) ಕೈಗಾರಿಕೆ ಸ್ಥಾಪನೆ ಮತ್ತು ಕೈಗಾರಿಕೆಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವುದಕ್ಕಾಗಿ ಜಮೀನನ್ನು ವಶಪಡಿಸಿಕೊಳ್ಳುವಾಗ ಭೂಮಾಲೀಕರ / ರೈತರ ಪ್ರತಿರೋಧವನ್ನು ಶಮನಗೊಳಿಸಲು ಯಾವ ರೈತರಿಂದ / ಭೂಮಾಲೀಕರಿಂದ ಜಮೀನನ್ನು ಸ್ವಾಧೀನ ಪಡಿಸಿಕೊಳ್ಳಲಾಗುವುದೋ ಅವರಿಗೆ ಹಣದ ಬದಲಾಗಿ ಕೆ.ಐ.ಎ.ಡಿ.ಬಿ.ಯಿಂದ ಅಭಿವೃದ್ಧಿ ಪಡಿಸಿದ ಜಮೀನನ್ನು ಪರಿಹಾರ ರೂಪದಲ್ಲಿ ನೀಡುವ ಬಗ್ಗೆ ಸರ್ಕಾರದ ನೀತಿಯನ್ನು ರೂಪಿಸಿದಲ್ಲಿ ಈ ಸಮಸ್ಯೆಗೆ ಪರಿಹಾರ ಸಿಗಬಹುದು ಎಂದು ದಿನಾಂಕ: 14.3.2007ರಂದು ನಡೆದ ಕೆ.ಐ.ಎ.ಡಿ. ಮಂಡಳಿಯ ಸಭೆಯಲ್ಲಿ ನಿರ್ಣಯವಾಗಿರುತ್ತದೆ. ಈ ವಿಚಾರದಲ್ಲಿ ನಿಯಮಾವಳಿಯನ್ನು ರೂಪಿಸಲು ಮಂಡಳಿಯು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತದೆ. ಈ ನಿಟ್ಟಿನಲ್ಲಿ ದಿನಾಂಕ: 15.5.2007ರಂದು ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಚರ್ಚಿಸಿ ನಿರ್ಣಯ ತೆಗೆದುಕೊಳ್ಳಲಾಗಿದೆ.

4) ಈ ಹಿನ್ನೆಲೆಯಲ್ಲಿ ಕೆ.ಐ.ಎ.ಡಿ.ಬಿ.ಯಿಂದ ಸ್ವಾಧೀನವಾಗುತ್ತಿರುವ ಜಮೀನಿಗೆ ಹಣದ ಬದಲಾಗಿ ಅಭಿವೃದ್ಧಿಪಡಿಸಿದ ಜಮೀನನ್ನು ಪರಿಹಾರವಾಗಿ ನೀಡುವ ವಿಷಯವನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡ ಆದೇಶವನ್ನು ಹೊರಡಿಸಲಾಗಿದೆ.

## ಸರ್ಕಾರದ ಆದೇಶ ಸಂಖ್ಯೆ: ಸಿಐ 417 ಎಸ್‌ಪಿಕ್ಯೂ 2007, ಬೆಂಗಳೂರು. ದಿನಾಂಕ 13ನೇ ಆಗಸ್ಟ್ 2007

ಸರ್ಕಾರದ ಕೈಗಾರಿಕಾ ನೀತಿಯನುಸಾರ ಕೈಗಾರಿಕೆಗಳನ್ನು ಸ್ಥಾಪಿಸಲು ರಾಜ್ಯದ ವಿವಿಧ ಪ್ರದೇಶಗಳಲ್ಲಿ ಜಮೀನನ್ನು ಸ್ವಾಧೀನಪಡಿಸಿಕೊಳ್ಳುವ ಪ್ರಕರಣಗಳಲ್ಲಿ ಭೂಮಾಲೀಕರಿಗೆ ಉದಾರ ಭೂಪರಿಹಾರ ನೀತಿಯನ್ನು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ಅನುಸರಿಸುತ್ತಿದೆ.

ಮಾಡುವ ಪ್ರಕರಣದ / ಭೂಮಾಲೀಕರಿಂದ ಜಮೀನನ್ನು ಸ್ವಾಧೀನಪಡಿಸಿಕೊಳ್ಳಲಾಗುವುದೋ ಅವರಿಗೆ ನಗದನ್ನು [illegible] ಪರಿಹಾರವನ್ನು ಒದಗಿಸುವ ದೃಷ್ಟಿಯಿಂದ ಸರ್ಕಾರವು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಸ್ವಾಧೀನವಾಗುತ್ತಿರುವ ಜಮೀನಿಗೆ ಪರಿಹಾರದ ಧನದ ಬದಲಾಗಿ ಅಭಿವೃದ್ಧಿಪಡಿಸಿದ ಜಮೀನನ್ನು ನಿರ್ದಿಷ್ಟ ಅನುಪಾತದಲ್ಲಿ ನೀಡುವ ಭೂ ಪಾಲುದಾರಿಕೆ ಯೋಜನೆಯನ್ನು ಜಾರಿಗೆ ತಂದಿರುತ್ತದೆ. ಈ ಯೋಜನೆಯ ರೂಪುರೇಷೆಗಳು ಮತ್ತು ಈ ಯೋಜನೆಗೆ ಅನ್ವಯವಾಗುವ ಷರತ್ತುಗಳನ್ನು ಈ ಕೆಳಗೆ ನೀಡಲಾಗಿದೆ.

ಅ) ಕೆ.ಐ.ಎ.ಡಿ.ಬಿ.ಯಿಂದ ಸ್ವಾಧೀನವಾಗುತ್ತಿರುವ ಜಮೀನಿಗೆ ಈಗಾಗಲೇ ಜಾರಿಯಲ್ಲಿರುವಂತೆ ಪರಿಹಾರವನ್ನು ನಗದು ರೂಪದಲ್ಲಿ ನೀಡಲಾಗುವುದು. ಆ ರೀತಿ ನಗದು ಪರಿಹಾರವನ್ನು ಒಪ್ಪದ ಭೂಮಾಲೀಕರಿಗೆ ಹಾಗೂ ಈ ಯೋಜನೆಯಡಿಯಲ್ಲಿ ಅಭಿವೃದ್ಧಿಪಡಿಸಿದ ಭೂಮಿಯನ್ನು ಪಡೆದುಕೊಳ್ಳಲು ಇಚ್ಛೆ ವ್ಯಕ್ತಪಡಿಸಿದವರಿಗೆ ನಗದು ಬದಲಾಗಿ ಅಭಿವೃದ್ಧಿಪಡಿಸಿದ ಜಮೀನನ್ನು ಪರಿಹಾರವಾಗಿ ನೀಡುವ ಈ ಯೋಜನೆಯನ್ನು ಜಾರಿಮಾಡಲಾಗಿದೆ. ಸರ್ಕಾರದ ಈ ನೀತಿಯು ಸರ್ಕಾರದ ಈ ಆದೇಶ ಹೊರಡಿಸುವ ದಿನಾಂಕದ ನಂತರ ಕೆ.ಐ.ಎ.ಡಿ. ಅಧಿನಿಯಮದ ಕಲಂ 28(1)ರ ಅಡಿಯಲ್ಲಿ ಹೊರಡಿಸಲಾಗುವ ಅಧಿಸೂಚನೆಗಳಿಗೆ ಆಕ್ಷೇಪಣೆಗಳನ್ನು ಆಹ್ವಾನಿಸುವಾಗ ಪ್ರತ್ಯೇಕ ನೋಟೀಸನ್ನು ಭೂಮಾಲೀಕರಿಗೆ ನೀಡಿ ಭೂ ಪಾಲುದಾರಿಕೆ ಯೋಜನೆಯನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ ಅವರ ಲಿಖಿತ ಹೇಳಿಕೆಯನ್ನು ನಿಗದಿತ ಮೂವತ್ತು ದಿನಗಳ ಅವಧಿಯಲ್ಲಿ ಸಲ್ಲಿಸಬೇಕೆಂದು ತಿಳಿಸುವ ಅವಕಾಶವನ್ನು ನೀಡಲಾಗುವುದು.

ಆ) ಈ ಯೋಜನೆಯ ಲಾಭವು ಈಗಾಗಲೇ ಕೆ.ಐ.ಎ.ಡಿ. ಅಧಿನಿಯಮದ ಕಲಂ 28(7)ರ ಅಡಿಯಲ್ಲಿ ಸ್ವಾಧೀನಪಡಿಸಿಕೊಂಡ ಜಮೀನನ್ನು ಸುಪರ್ದು (possession) ತೆಗೆದುಕೊಳ್ಳದೇ ಇರುವ ಪ್ರಕರಣಗಳಿಗೆ ಮಾತ್ರ ಅನ್ವಯಿಸುತ್ತದೆ. ಈ ಪ್ರಕರಣಗಳಲ್ಲಿ ಭೂ ಮಾಲೀಕರಿಗೆ 30 ದಿನಗಳ ನೋಟೀಸನ್ನು ನೀಡಿ ಭೂ ಪಾಲುದಾರಿಕೆ ಯೋಜನೆಯನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ ಲಿಖಿತ ಒಪ್ಪಿಗೆ ಪಡೆದುಕೊಳ್ಳಲಾಗುವುದು.

ಇ) ಸದರಿ ಭೂಪಾಲುದಾರಿಕೆ ಯೋಜನೆಯು ನಗದು ಪರಿಹಾರ ಅಥವಾ ನಗದು ಬದಲಿಗೆ ಅದೇ ಪ್ರದೇಶದಲ್ಲಿ ಸ್ವಾಧೀನಪಡಿಸಿಕೊಂಡ ಪ್ರತಿ 10 ಗುಂಟೆಗೆ 2.125ಚದರಡಿ ಅನುಪಾತದಲ್ಲಿ ಅಭಿವೃದ್ಧಿಪಡಿಸಿದ ಜಮೀನನ್ನು ನೀಡಲಾಗುವುದು. 10 ಗುಂಟೆಗಿಂತ ಕಡಿಮೆ ವಿಸ್ತೀರ್ಣದ ಜಮೀನಿಗೆ ಪರಿಹಾರವನ್ನು ನಗದು ರೂಪದಲ್ಲಿ ಮಾತ್ರ ನೀಡಲಾಗುವುದು. 10 ಗುಂಟೆ ನಂತರದ [illegible] ಬರುವ ಭಾಗಾಂಶದ ವಿಸ್ತೀರ್ಣಕ್ಕೆ ಪರಿಹಾರವನ್ನು ನಗದು ರೂಪದಲ್ಲಿ ಮಾತ್ರ ನೀಡಲಾಗುವುದು.

ಈ) ಈ ಭೂಪಾಲುದಾರಿಕೆ ಯೋಜನೆಯು 10 ಗುಂಟೆ ಅಥವಾ ಹೆಚ್ಚಿನ ಜಮೀನನ್ನು ಕಳೆದುಕೊಂಡ ಭೂಮಾಲೀಕರಿಗೆ ಮಾತ್ರ ಅನ್ವಯಿಸುತ್ತದೆ.

ಉ) ಅಭಿವೃದ್ಧಿಗೊಳಿಸಿದ ಜಮೀನನ್ನು ಪರಿಹಾರವಾಗಿ ಪಡೆದ ಭೂಮಾಲೀಕರು ಅದನ್ನು ವಸತಿ / ವಾಣಿಜ್ಯ / ಕೈಗಾರಿಕೆ ಉದ್ದೇಶಗಳಿಗಾಗಿ ಸ್ವತಃ ಬಳಸಿಕೊಳ್ಳಬಹುದು ಅಥವಾ ಸದರಿ ಜಾಗದ ಮೇಲೆ ಮಾಲೀಕತ್ವದ ಪೂರ್ತಿ ಹಕ್ಕನ್ನು ಚಲಾಯಿಸಬಹುದು. ಆದರೆ ಅಂತಹ ಜಾಗದ ಮೇಲೆ ಯಾವುದೇ ನಿರ್ಮಾಣ ಕಾರ್ಯ ಪ್ರಾರಂಭಿಸುವ ಮೊದಲು ನಕ್ಷೆಯನ್ನು ಕೆ.ಐ.ಎ.ಡಿ.ಬಿ. ಯಿಂದ ಮಂಜೂರು ಮಾಡಿಸಿಕೊಳ್ಳತಕ್ಕದ್ದಾಗಿರುತ್ತದೆ.

ಊ) ಯೋಜನೆಯು ಸರ್ಕಾರಿ ಆದೇಶ ಹೊರಡಿಸಿದ ದಿನಾಂಕದಂದು ಕೆ.ಐ.ಎ.ಡಿ. ಕಾಯ್ದೆ ಕಲಂ 28(7)ರ ಅಡಿಯಲ್ಲಿ ಕಬ್ಜೆ ಪಡೆಯದ ಪ್ರಕರಣಗಳಿಗೆ ಮಾತ್ರ ಅನ್ವಯಿಸುತ್ತದೆ.

ಋ) ಈ ಯೋಜನೆಯು ಏಕಘಟಕ ಸಂಕೀರ್ಣ (SUC) ಕೈಗಾರಿಕಾ ಪಾರ್ಕುಗಳಿಗೆ ಹಾಗೂ ಮೂಲಭೂತ ಸೌಕರ್ಯ ಯೋಜನೆಗಳಿಗೆ (Infrastructural Projects) ಪ್ರತ್ಯೇಕವಾಗಿ ಹೊರಡಿಸಲಾಗುವ ಪ್ರಕರಣಗಳಿಗೆ ಅನ್ವಯ ಆಗುವುದಿಲ್ಲ.

ೠ) ಈ ಯೋಜನೆಯು ಈ ಆದೇಶ ಹೊರಡಿಸಿದ ದಿನಾಂಕದಿಂದ ಜಾರಿಗೆ ಬರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಸ್. ಲೋಕನಾಥರಾವ್)
ಸರ್ಕಾರದ ಅಧೀನ ಕಾರ್ಯದರ್ಶಿ, (ಕೈ.ಅ)
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ, ಪ್ರಕಟಿಸಿದ 200 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ಕೈಗಾರಿಕಾಭಿವೃದ್ಧಿ ಇವರಿಗೆ ಒದಗಿಸಲು ಕೋರಿದೆ.

ಪ್ರತಿಯನ್ನು:

1. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ಬೆಂಗಳೂರು.
3. ಸರ್ಕಾರದ ಅಭಿವೃದ್ಧಿ ಆಯುಕ್ತರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ.
4. ಸರ್ಕಾರದ ಎಲ್ಲಾ ಇಲಾಖೆಯ ಎಲ್ಲಾ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.
5. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
6. ಆಯುಕ್ತರು, ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ಬೆಂಗಳೂರು.
7. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಮತ್ತು ಕಾರ್ಯಕಾರಿ ಸದಸ್ಯರು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ, ನೃಪತುಂಗ ರಸ್ತೆ, ಬೆಂಗಳೂರು.
8. ಮುಖ್ಯ ಅಭಿಯಂತರರು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ, ನೃಪತುಂಗ ರಸ್ತೆ, ಬೆಂಗಳೂರು.
9. ವಿಶೇಷ ಜಿಲ್ಲಾಧಿಕಾರಿಗಳು, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ, ನೃಪತುಂಗ ರಸ್ತೆ, ಬೆಂಗಳೂರು.
10. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಉದ್ಯೋಗ ಮಿತ್ರ, ಖನಿಜ ಭವನ, ಬೆಂಗಳೂರು.
11. ಸರ್ಕಾರದ ಉಪ ಕಾರ್ಯದರ್ಶಿ, ಸಚಿವ ಸಂಪುಟ ವ್ಯವಹಾರಗಳ ಇಲಾಖೆ (ಸಚಿವ ಸಂಪುಟ), ವಿಧಾನ ಸೌಧ, ಬೆಂಗಳೂರು.
12. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
13. ಸರ್ಕಾರದ ಅಪರ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ, ಇವರ ಆಪ್ತ ಸಹಾಯಕ.
14. ವಾರದ ಗೆಜೆಟ್ - 4 ಪ್ರತಿಗಳು.
15. ರಕ್ಷಾ ಕಡತ / ಹೆಚ್ಚಿನ ಪ್ರತಿಗಳು.

***

6

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಭೂಸ್ವಾಧೀನಪಡಿಸಿಕೊಳ್ಳುತ್ತಿರುವ ಜಮೀನುಗಳಿಗೆ ಭೂ ಪರಿಹಾರದ ಬದಲಾಗಿ ಅಭಿವೃದ್ಧಿಪಡಿಸಿದ 8500 ಚ.ಅಡಿಯಿಂದ 9583 ಚ.ಅಡಿ ವಿಸ್ತೀರ್ಣದ ಜಮೀನು ನೀಡುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಸಿಐ 417 ಎಸ್‌ಪಿಕ್ಯೂ 2007 ದಿನಾಂಕ: 13.08.2007
2. ಸಿ.ಇ.ಓ. & ಇ.ಎಂ., ಕೆ.ಐ.ಎ.ಡಿ.ಬಿ.ಯವರ ಪತ್ರ ಸಂಖ್ಯೆ: ಕೆಐಎಡಿಬಿ/ ಕೇಂಕ/ ವಿಜಿ/ ಭೂಸ್ವಾ/ 1881/ 12669/ 2009-10 ದಿನಾಂಕ: 13.01.2010

* * * * *

ಪ್ರಸ್ತಾವನೆ:

ಸರ್ಕಾರದ ಕೈಗಾರಿಕಾ ನೀತಿಯ ಅನುಸಾರ ಕೈಗಾರಿಕೆಗಳನ್ನು ಸ್ಥಾಪಿಸಲು ರಾಜ್ಯದ ವಿವಿಧ ಪ್ರದೇಶಗಳಲ್ಲಿ ಜಮೀನನ್ನು ಸ್ವಾಧೀನಪಡಿಸಿಕೊಳ್ಳುವ ಪ್ರಕರಣಗಳಲ್ಲಿ ಭೂ ಮಾಲೀಕರಿಗೆ ಉದಾರವಾಗಿ ಪರಿಹಾರ ನೀಡುವ ನೀತಿಯನ್ನು ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ಅನುಸರಿಸುತ್ತಿದೆ. ಸದರಿ ಮಂಡಳಿಯಿಂದ ಸ್ವಾಧೀನವಾಗುತ್ತಿರುವ ಜಮೀನಿಗೆ ಪಾಲುದಾರಿಕೆಯ ಮೇಲೆ ನಗದು ಪರಿಹಾರ ಅಥವಾ ನಗದು ಬದಲಾಗಿ ಅದೇ ಪ್ರದೇಶದಲ್ಲಿ ಸ್ವಾಧೀನಪಡಿಸಿಕೊಂಡ ಪ್ರತಿ 10 ಗುಂಟೆ ಜಮೀನಿಗೆ 2.125 ಚ.ಅಡಿ ಅನುಪಾತದಲ್ಲಿ ಅಭಿವೃದ್ಧಿಪಡಿಸಿದ ಜಮೀನನ್ನು ನೀಡಲು ಮತ್ತು ಪ್ರತಿ 10 ಗುಂಟೆಗಿಂತ ಕಡಿಮೆ ವಿಸ್ತೀರ್ಣದ ಜಮೀನಿಗೆ ಪರಿಹಾರವನ್ನು ಹಣದ ರೂಪದಲ್ಲಿ ಹಾಗೂ 10 ಗುಂಟೆ ನಂತರದ ದಶಾಂಶದ ನಡುವೆ ಬರುವ ಭಾಗಾಂಶದ ವಿಸ್ತೀರ್ಣದ ಪರಿಹಾರವನ್ನು ಹಣದ ರೂಪದಲ್ಲಿ ನೀಡಲು ಅಂದರೆ ಕೈಗಾರಿಕಾ ಸ್ಥಾಪನೆಗೆ ಮತ್ತು ಕೈಗಾರಿಕೆಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಸಲುವಾಗಿ ಜಮೀನುಗಳನ್ನು ವಶಪಡಿಸಿಕೊಳ್ಳುವಾಗ ಯಾವ ರೈತರಿಂದ / ಭೂ ಮಾಲೀಕರಿಂದ ಜಮೀನನ್ನು ಸ್ವಾಧೀನಪಡಿಸಿಕೊಳ್ಳಲಾಗುವುದೋ ಅವರಿಗೆ ಹಣದ ಬದಲಾಗಿ, ಪ್ರತಿ ಎಕರೆಗೆ 8500 ಚ.ಅಡಿ ಅಭಿವೃದ್ಧಿಪಡಿಸಿದ ಜಮೀನನ್ನು ನೀಡಲು ಓದಲಾದ (1)ರ ಆದೇಶದಲ್ಲಿ ಅವಕಾಶ ಕಲ್ಪಿಸಲಾಗಿತ್ತು.

ಆದರೆ, ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಹಾಗೂ ಕಾರ್ಯನಿರ್ವಾಹಕ ಸದಸ್ಯರು ಮೇಲೆ ಓದಲಾದ (2)ರ ಪ್ರಸ್ತಾವನೆಯಲ್ಲಿ ರೈತ ಹೋರಾಟ ಸಮಿತಿ ಇವರು ಮಂಡಳಿಗೆ ಮತ್ತು ಸರ್ಕಾರಕ್ಕೆ ಮನವಿ ಸಲ್ಲಿಸಿ, ಮಂಡಳಿಯಿಂದ ಕೈಗಾರಿಕಾ ಪ್ರದೇಶಗಳಿಗಾಗಿ ಭೂಸ್ವಾಧೀನಪಡಿಸುವ ಜಮೀನಿಗೆ ಹಾಲಿ ಇರುವಂತೆ ಪ್ರತಿ ಎಕರೆ ಒಂದಕ್ಕೆ 8500 ಚ.ಅಡಿ ಬದಲಾಗಿ ನಗರಾಭಿವೃದ್ಧಿ ಇಲಾಖೆಯಿಂದ ಹೊರಡಿಸಿರುವ ಆದೇಶ ಸಂಖ್ಯೆ: ನಅಇ/ 427/ ಬೆಂಭೂಸ್ವಾ/ 2007 ದಿನಾಂಕ: 02.04.2008ರಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ನೀಡುತ್ತಿರುವಂತೆ ಪ್ರತಿ ಎಕರೆಗೆ 9583 ಚ.ಅಡಿ ಅಭಿವೃದ್ಧಿಪಡಿಸಿದ ಜಮೀನನ್ನು ಭೂ ಮಾಲೀಕರಿಗೆ ನೀಡುವಂತೆ ಕೋರಿರುತ್ತಾರೆ. ಅದರಂತೆ, ದಿನಾಂಕ: 19.12.2008ರಂದು ನಡೆದ ಮಂಡಳಿ ಸಭೆಯಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಭೂಸ್ವಾಧೀನಪಡಿಸಿಕೊಂಡ ಜಮೀನಿಗೆ ಪರಿಹಾರಕ್ಕೆ ಬದಲಾಗಿ ಪ್ರತಿ ಎಕರೆಗೆ 9583 ಚ.ಅಡಿ ಅಭಿವೃದ್ಧಿಪಡಿಸಿದ ಜಮೀನನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಅನುಸರಿಸುತ್ತಿರುವ ಮಾದರಿಯಲ್ಲಿ ನೀಡುವ ಬಗ್ಗೆ ನಿರ್ಣಯಿಸಲಾಗಿದೆ ಎಂದು ತಿಳಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಭೂಸ್ವಾಧೀನಪಡಿಸಿಕೊಂಡ ಜಮೀನಿಗೆ ಹಣದ ಬದಲಾಗಿ ಈಗಾಗಲೇ ನೀಡುತ್ತಿರುವ 8500 ಚ.ಅಡಿ ಜಮೀನಿನ ಬದಲಾಗಿ 9583 ಚ.ಅಡಿ ಜಮೀನನ್ನು ನೀಡುವ ಬಗ್ಗೆ ಸರ್ಕಾರದ ಮಟ್ಟದಲ್ಲಿ ಕೂಲಂಕಷವಾಗಿ ಪರಿಶೀಲಿಸಿ, ಆದೇಶ ಹೊರಡಿಸಬೇಕಾಗಿರುವುದರಿಂದ ಈ ಆದೇಶ:

. . . . 2

**ಸರ್ಕಾರಿ ಆದೇಶ ಸಂಖ್ಯೆ: ಸಿಐ 495 ಎಸ್‌ಪಿಕ್ಯೂ 2008, ಬೆಂಗಳೂರು, ದಿನಾಂಕ: 13ನೇ ಮೇ 2010**

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ ಸರ್ಕಾರಿ ಆದೇಶ ಸಂಖ್ಯೆ: ಸಿಐ 417 ಎಸ್‌ಪಿಕ್ಯೂ 2007, ದಿನಾಂಕ: 13.08.2007ರಲ್ಲಿ ಆದೇಶಿಸಿರುವಂತೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಸ್ವಾಧೀನಪಡಿಸುತ್ತಿರುವ ಭೂ ಮಾಲೀಕರ ಜಮೀನಿಗೆ ಪರಿಹಾರ ಹಣದ ಬದಲಾಗಿ ಪ್ರಸ್ತುತ ಜಾರಿಯಲ್ಲಿರುವ ಪ್ರತಿ ಎಕರೆ ಜಮೀನಿಗೆ ಪರಿಹಾರವಾಗಿ 8500 ಚ.ಅಡಿಯಿಂದ 9583 ಚ.ಅಡಿ ವಿಸ್ತೀರ್ಣಕ್ಕೆ ಹೆಚ್ಚಿಸಿ, ಅಭಿವೃದ್ಧಿಪಡಿಸಿದ ಜಮೀನನ್ನು ನೀಡಲು ಆದೇಶಿಸಲಾಗಿದೆ.

ಸರ್ಕಾರಿ ಆದೇಶ ಸಂಖ್ಯೆ: ಸಿಐ 417 ಎಸ್‌ಪಿಕ್ಯೂ 2007ರ ದಿನಾಂಕ: 13.08.2007ರಲ್ಲಿ ತಿಳಿಸಿರುವ ಉಳಿದ ನಿಬಂಧನೆಗಳು ಜಾರಿಯಲ್ಲಿರುತ್ತದೆ.

ಈ ಯೋಜನೆಯು ಈ ಆದೇಶ ಹೊರಡಿಸಿದ ದಿನಾಂಕದಿಂದ ಜಾರಿಗೆ ಬರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

K. H. Seshagiri 13.5.10

(ಕೆ.ಹೆಚ್. ಶೇಷಗಿರಿ)
ಸರ್ಕಾರದ ಅಧೀನ ಕಾರ್ಯದರ್ಶಿ(ಕೈ.ಅ)
ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ.

**ಇವರಿಗೆ,**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ, ಪ್ರಕಟಿಸಿದ 200 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ಕೈಗಾರಿಕಾಭಿವೃದ್ಧಿ ಶಾಖೆ ಇವರಿಗೆ ಒದಗಿಸಲು ಕೋರಿದೆ.

**ಪ್ರತಿಯನ್ನು:**

1. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ಬೆಂಗಳೂರು.
2. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ, ಬೆಂಗಳೂರು.
3. ಸರ್ಕಾರದ ಎಲ್ಲಾ ಇಲಾಖೆಗಳ ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು
4. ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಆಯುಕ್ತರು, ಕೈಗಾರಿಕಾಭಿವೃದ್ಧಿ ಮತ್ತು ನಿರ್ದೇಶಕರು, ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
6. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಮತ್ತು ಕಾರ್ಯ ನಿರ್ವಾಹಕ ಸದಸ್ಯರು, ಕೆ.ಐ.ಎ.ಡಿ.ಬಿ., ನೃಪತುಂಗ ರಸ್ತೆ, ಬೆಂಗಳೂರು.
7. ಮುಖ್ಯ ಅಭಿವೃದ್ಧಿ ಅಧಿಕಾರಿ, ಕೆ.ಐ.ಎ.ಡಿ.ಬಿ., ನೃಪತುಂಗ ರಸ್ತೆ, ಬೆಂಗಳೂರು.
8. ವಿಶೇಷ ಜಿಲ್ಲಾಧಿಕಾರಿಗಳು, ಕೆ.ಐ.ಎ.ಡಿ.ಬಿ., ನೃಪತುಂಗ ರಸ್ತೆ, ಬೆಂಗಳೂರು.
9. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಉದ್ಯೋಗ ಮಿತ್ರ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
10. ಸರ್ಕಾರದ ಉಪ ಕಾರ್ಯದರ್ಶಿ, ಸಂಚಿವ ಸಂಪುಟ ವ್ಯವಹಾರಗಳ ಇಲಾಖೆ (ಸಚಿವ ಸಂಪುಟ), ವಿಧಾನ ಸೌಧ, ಬೆಂಗಳೂರು.
11. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ವಿಕಾಸ ಸೌಧ, ಬೆಂಗಳೂರು
12. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸ ಸೌಧ, ಬೆಂಗಳೂರು
13. ವಾದದ ಗೆಜೆಟ್ – 4 ಪ್ರತಿಗಳು
14. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.